593 (918) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸೂರತ್ಕಲ್) : ಮಾನ್ಯ ಆಹಾರ ಮತ್ತು ನಾಗರೀಕ ಪೂರೈಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸುರತ್ಕಲ್ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಿಕೊಡಲಾಗಿದೆ;

ಆ) ಕುಡಿಯುವ ನೀರಿನ ಕೊರತೆ ಇರುವ ಉಳಿದ ಗ್ರಾಮಗಳಿಗೆ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಗಾಗಿ ಸರ್ಕಾರದ ತ್ವರಿತ ಕ್ರಮಗಳೇನು;

ಇ) ಕಳೆದ ಎರಡು ವರ್ಷಗಳಲ್ಲಿ ಈ ಕುರಿತಾಗಿ ಜಾರಿಗೊಳಿಸಿದ ಕುಡಿಯುವ ನೀರಿನ ಯೋಜನೆಗಳ ವಿವರಗಳೇನು?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ಮತ್ತು ನಾಗರೀಕ ಪೂರೈಕೆ ಸಚಿವರು) :

ಅ) ಸುರತ್ಕಲ್ ಕ್ಷೇತ್ರದ ಎಲ್ಲಾ 37 ಗ್ರಾಮಗಳಿಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದ್ದು, 29 ಜನವಸತಿಗಳಿಗೆ 40 LPCD ಪ್ರಮಾಣದಲ್ಲಿ ನೀರು ಪೂರೈಕೆಯಾಗುತ್ತಿದೆ. ಉಳಿದ 8 ಗ್ರಾಮಗಳಲ್ಲಿ 40 LPCD ಗಿಂತ ಕಡಿಮೆ ನೀರು ಪೂರೈಕೆಯಿದೆ.

ಆ) ಸದರಿ 8 ಗ್ರಾಮಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅಭಿವೃದ್ಧಿ/ ಹೆಚ್ಚಳ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ತುರ್ತು ಸಂದರ್ಭದಲ್ಲಿ 7 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗಿದೆ.

ಇ) ಕಳೆದ 2 ವರ್ಷಗಳಲ್ಲಿ ರಾಜ್ಯ ಮತ್ತು ಕೇಂದ್ರ ಪುರಸ್ಕೃತ ಕುಡಿಯುವ ನೀರಿನ ಕಾರ್ಯಕ್ರಮಗಳಡಿ 5 ತೆರೆದ ಬಾವಿಗಳು, 20 ಕೊಳವೆ ಬಾವಿ ಕಾಮಗಾರಿಗಳನ್ನು ಹಾಗೂ 4 ಕೊಳವೆ ನೀರು ಸರಬರಾಜು ಯೋಜನೆಗಳನ್ನು ಅನುಷ್ಟಾನಗೊಳಿಸಲಾಗಿದೆ.

594 (540) ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪಡಿತರ ಚೀಟಿಯನ್ನು ಶೇ. 60ರಷ್ಟು ಬಡವರಿಗೆ ಮಾತ್ರ ವಿತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಉಳಿದ ಶೇ. 40ರಷ್ಟು ಬಡವರಿಗೆ ಈ ಸೌಲಭ್ಯ ವಿತರಿಸಲು ಕೈಗೊಳ್ಳಲಾದ ಕ್ರಮವೇನು?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಮನೆ ಮನೆ ಸಮೀಕ್ಷಾ ಕಾರ್ಯದಲ್ಲಿ 1,20,16,453 ಕುಟುಂಬಗಳನ್ನು ಸಮೀಕ್ಷಿಸಲಾಗಿದೆ ಮತ್ತು 64,80,542 ಕುಟುಂಬಗಳನ್ನು (53.93%) ಬಿಪಿಎಲ್, 55,35,911 ಎಪಿಎಲ್ ಕುಟುಂಬಗಳೆಂದು ಗುರುತಿಸಲಾಗಿದೆ.

ಆ) ಉಳಿದ ಪಡಿತರ ಚೀಟಿದಾರರು ಬಡತನ ರೇಖೆಗಿಂತ ಮೇಲ್ಪಟ್ಟ ಆದಾಯ ಹೊಂದಿರುವುದರಿಂದ ಇಂತಹವರಿಗೆ ಎಪಿಎಲ್ ಪಡಿತರ ಚೀಟಿಗಳನ್ನು ನೀಡಲಾಗುವುದು.

595 (988) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೀದರ್ ಜಿಲ್ಲೆಯಲ್ಲಿ ನಬಾರ್ಡ್ ಅನುದಾನದಲ್ಲಿ ಕೃಷಿ ಮಾರುಕಟ್ಟೆ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆವಿಗೆ ತೆಗೆದುಕೊಂಡಿರುವ ಅಭಿವೃದ್ಧಿ ಕಾಮಗಾರಿಗಳೇನು; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು);

ಆ) ಆ ಪೈಕಿ ಎಷ್ಟು ಕಾಮಗಾರಿಗಳು ಪೂರ್ಣವಾಗಿದೆ; ಎಷ್ಟು ಅಪೂರ್ಣವಾಗಿವೆ; ಹಾಗೂ ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು;

ಇ) ಪ್ರಸಕ್ತ ಸಾಲಿನಲ್ಲಿ ನಬಾರ್ಡ್ ಅನುದಾನದಲ್ಲಿ ಜಿಲ್ಲೆಯಲ್ಲಿ ವಿಶೇಷವಾಗಿ ಬಸವಕಲ್ಯಾಣ ಮತಕ್ಷೇತ್ರದಲ್ಲಿ ತೆಗೆದುಕೊಳ್ಳಲಾದ ಕಾಮಗಾರಿಗಳಾವುವು; ಈ ಬಗ್ಗೆ ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳೆಷ್ಟು?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ನಬಾರ್ಡ್ ಅನುದಾನದಲ್ಲಿ ಒಟ್ಟು 7 ಗ್ರಾಮೀಣ ಸಂತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ–1ರಲ್ಲಿ ಒದಗಿಸಲಾಗಿದೆ.

ಆ) ಆ ಪೈಕಿ ಯಾವುದೇ ಕಾಮಗಾರಿಗಳು ಪೂರ್ಣಗೊಂಡಿರುವುದಿಲ್ಲ. ಹಾಗೂ 3 ಗ್ರಾಮೀಣ ಸಂತೆ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. 3 ಗ್ರಾಮೀಣ ಸಂತೆ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿರುತ್ತವೆ. ಉಳಿದ 1 ಕಾಮಗಾರಿಯು ಸ್ಥಳದ ತಕರಾರಿನಿಂದ ಸ್ಥಗಿತಗೊಂಡಿರುತ್ತವೆ. ಮೇಲ್ಕಂಡ ಎಲ್ಲಾ ಕಾಮಗಾರಿಗಳನ್ನು ಆದಷ್ಟು ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ವಿವರಗಳನ್ನು ಅನುಬಂಧ–1ರಲ್ಲಿ ಒದಗಿಸಲಾಗಿದೆ.

ಇ) ಪ್ರಸಕ್ತ ಸಾಲಿನಲ್ಲಿ ಬಸವಕಲ್ಯಾಣ ಮತ ಕ್ಷೇತ್ರದಲ್ಲಿ ಈ ಕೆಳಕಂಡ 5 ಗ್ರಾಮೀಣ ಸಂತೆಗಳನ್ನು ಕೈಗೊಳ್ಳಲು ಪ್ರಸ್ತಾಪಿಸಲಾಗಿದೆ.

1. ಹರಕೂಡ ಗ್ರಾಮೀಣ ಸಂತೆ
2. ಭೋಸಗ ಗ್ರಾಮೀಣ ಸಂತೆ
3. ಲಡವಂತಿ ಗ್ರಾಮೀಣ ಸಂತೆ
4. ಮುಡವಿ ಗ್ರಾಮೀಣ ಸಂತೆ
5. ಉಜಲಾಂಭ ಗ್ರಾಮೀಣ ಸಂತೆ